ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೇಂದ್ರ ವಲಯ ಕೃಷಿ ಗಣತಿ ಯೋಜನೆ 2015–16ಕ್ಕೆ ಸಂಬಂಧಿಸಿದಂತೆ, ರಾಜ್ಯ ಮತ್ತು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ರಚಿಸುವ ಕುರಿತು.

**ಓದಲಾಗಿದೆ:** ಸರ್ಕಾರದ ಕಾರ್ಯದರ್ಶಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಸಂ: ಆಸಾಂನಿ/51/ಎಜಿಸಿ/2015–16/168 ದಿನಾಂಕ:08–01–2016.

*****

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಸರ್ಕಾರದ ಕಾರ್ಯದರ್ಶಿಗಳು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಭಾರತ ಸರ್ಕಾರದ ಪತ್ರ ಸಂಖ್ಯೆ: 11015/1/2014–ACU(T).V.II, ದಿನಾಂಕ:08.01.2016ರಲ್ಲಿ 2015–16ನೇ ಸಾಲನ್ನು ಭೂ ದಾಖಲೆ ವರ್ಷವೆಂದು ಘೋಷಿಸಲಾಗಿದ್ದು, ಜುಲೈ 2016ನೇ ತಿಂಗಳಿನಲ್ಲಿ ಕೃಷಿ ಗಣತಿ 2015–16ಕ್ಕೆ ಸಂಬಂಧಪಟ್ಟಂತೆ ಕ್ಷೇತ್ರ ಕಾರ್ಯಾಚರಣೆಯನ್ನು ವಿವಿಧ ಹಂತಗಳಲ್ಲಿ ಕೈಗೊಳ್ಳಬೇಕಾಗಿರುವುದರಿಂದ ಗಣತಿ ಕಾರ್ಯದಲ್ಲಿ ಉದ್ಭವಿಸುವ ಸಮಸ್ಯೆಗಳನ್ನು ಪರಿಹರಿಸುವ ಸಲುವಾಗಿ ರಾಜ್ಯ ಮಟ್ಟದಲ್ಲಿ ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ಹಾಗೂ ಪದನಿಮಿತ್ತ ರಾಜ್ಯ ಕೃಷಿ ಗಣತಿ ಆಯುಕ್ತರು, ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್‌ರ ಅಧ್ಯಕ್ಷತೆಯಲ್ಲಿ ಸಮನ್ವಯ ಸಮಿತಿಗಳನ್ನು ರಚಿಸುವಂತೆ ಕೋರಿರುತ್ತಾರೆ.

ಈ ಕೋರಿಕೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂ: ಆರ್‌ಡಿ 160 ಟಿಎನ್‌ಆರ್ 2016, ಬೆಂಗಳೂರು; ದಿನಾಂಕ: 18–05–2016.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಹಿನ್ನೆಲೆಯಲ್ಲಿ, ಕೇಂದ್ರ ವಲಯ ಕೃಷಿಗಣತಿ ಯೋಜನೆ 2015–16ಕ್ಕೆ ಸಂಬಂಧಿಸಿದಂತೆ, ರಾಜ್ಯ ಮಟ್ಟದಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಸಮನ್ವಯ ಸಮಿತಿಗಳನ್ನು ಈ ಕೆಳಕಂಡಂತೆ ರಚಿಸಿ ಆದೇಶಿಸಿದೆ.

**(ಅ) ರಾಜ್ಯ ಮಟ್ಟದ ಸಮನ್ವಯ ಸಮಿತಿ:**

1. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ಹಾಗೂ ಪದನಿಮಿತ್ತ ರಾಜ್ಯ ಕೃಷಿ ಗಣತಿ ಆಯುಕ್ತರು, ಕರ್ನಾಟಕ ಸರ್ಕಾರ – ಅಧ್ಯಕ್ಷರು
2. ಅಪರ ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ – ಉಪಾಧ್ಯಕ್ಷರು
3. ಪ್ರತಿನಿಧಿ, ಕೃಷಿಗಣತಿ, ಕೃಷಿ ಮತ್ತು ಸಹಕಾರ ಇಲಾಖೆ, ಕೃಷಿ ಮಂತ್ರಾಲಯ ಭಾರತ ಸರ್ಕಾರ, ನವದೆಹಲಿ – ಸದಸ್ಯರು
4. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ಭೂ ಕಂದಾಯ) – ಸದಸ್ಯರು
5. ತಾಂತ್ರಿಕ ನಿರ್ದೇಶಕರು/ಸ್ಟೇಟ್ ಇನ್‌ಫರ್‌ಮ್ಯಾಟಿಕ್ ಆಫೀಸರ್, ಎನ್.ಐ.ಸಿ. ಕರ್ನಾಟಕ ರಾಜ್ಯ ಘಟಕ, ಬೆಂಗಳೂರು. – ಸದಸ್ಯರು
6. ಜಂಟಿ ನಿರ್ದೇಶಕರು, ಕೃಷಿ ಅಂಕಿ ಅಂಶಗಳ ವಿಭಾಗ, ಆಸಾಂನಿ, ಬೆಂಗಳೂರು – ಸದಸ್ಯರು
7. ಜಂಟಿ ನಿರ್ದೇಶಕರು, (Crop Development) ಕೃಷಿ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು. – ಸದಸ್ಯರು
8. ಜಂಟಿ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು – ಸದಸ್ಯರು
9. ಜಂಟಿ ನಿರ್ದೇಶಕರು, ಕೃಷಿ ಗಣತಿ, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಕರ್ನಾಟಕ ಸರ್ಕಾರ. – ಸದಸ್ಯರು

...2–

(ಅ) ಜಿಲ್ಲಾ ಮಟ್ಟದ ಸಮನ್ವಯಸಮಿತಿ:

1. ಜಿಲ್ಲಾಧಿಕಾರಿಗಳು - ಅಧ್ಯಕ್ಷರು
2. ಅಪರ ಜಿಲ್ಲಾಧಿಕಾರಿಗಳು - ಸದಸ್ಯರು
3. ಜಿಲ್ಲೆಯಲ್ಲಿನ ಎಲ್ಲಾ ಉಪವಿಭಾಗಾಧಿಕಾರಿಗಳು - ಸದಸ್ಯರುಗಳು
4. ಜಂಟಿ ನಿರ್ದೇಶಕರು, ಕೃಷಿ ಇಲಾಖೆ - ಸದಸ್ಯರು
5. ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ - ಸದಸ್ಯರು
6. ಜಿಲ್ಲೆಯ ಭೂದಾಖಲೆಗಳ ಉಪ ನಿರ್ದೇಶಕರು - ಸದಸ್ಯರು
7. ಆಯಾ ಜಿಲ್ಲೆಯ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು- ಸದಸ್ಯ ಕಾರ್ಯದರ್ಶಿ

(ಉ) ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ:

1. ತಹಶೀಲ್ದಾರರು - ಅಧ್ಯಕ್ಷರು
2. ಉಪ ತಹಶೀಲ್ದಾರರು(ನಾಡ ಕಚೇರಿ) - ಸದಸ್ಯರು
3. ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ - ಸದಸ್ಯರು
4. ಸಹಾಯಕ ನಿರ್ದೇಶಕರು, ತೋಟಗಾರಿಕೆ ಇಲಾಖೆ - ಸದಸ್ಯರು
5. ಸಹಾಯಕ ನಿರ್ದೇಶಕರು, ಭೂ ದಾಖಲೆ - ಸದಸ್ಯರು
6. ಕಂದಾಯ ನಿರೀಕ್ಷಕರು, ಕಂದಾಯ ಇಲಾಖೆ - ಸದಸ್ಯರು
7. ಸಾಂಖ್ಯಿಕ ನಿರೀಕ್ಷಕರು, ತಾಲ್ಲೂಕು ಕಛೇರಿ - ಸದಸ್ಯ ಕಾರ್ಯದರ್ಶಿಗಳು

ಮೇಲ್ಕಂಡ ಸಮನ್ವಯ ಸಮಿತಿಗಳು ಕೃಷಿ ಗಣತಿ 2015-16ಕ್ಕೆ ಸಂಬಂಧಿಸಿದ ವಿವಿಧ ಹಂತಗಳ ಕೆಲಸ ಕಾರ್ಯಗಳ ಪ್ರಗತಿಯನ್ನು ಪರಿಶೀಲಿಸಿ, ಎಲ್ಲಾ ಕಾರ್ಯಗಳು ವೇಳಾಪಟ್ಟಿಗೆ ಅನುಗುಣವಾಗಿ ಪೂರ್ಣಗೊಳಿಸಲು ಅನುಕೂಲವಾಗುವಂತೆ ಹಾಗೂ ಗಣತಿ ಕಾರ್ಯದಲ್ಲಿ ಉದ್ಭವಿಸುವ ಸಮಸ್ಯೆಗಳನ್ನು ಸಕಾಲದಲ್ಲಿ ಪರಿಶೀಲಿಸುವ ಸಲುವಾಗಿ ರಾಜ್ಯ ಮಟ್ಟದ ಸಮನ್ವಯ ಸಮಿತಿಯ ಸಭೆಯನ್ನು ಪ್ರತಿ ಎರಡು ತಿಂಗಳಿಗೊಮ್ಮೆ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮನ್ವಯ ಮಟ್ಟದ ಸಮನ್ವಯ ಸಮಿತಿ ಸಭೆಯನ್ನು ಪ್ರತಿ ತಿಂಗಳು ನಡೆಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಕೆ.ಶ್ರೀಪಾದರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ(ವಿ.ನಿ, ಮತ್ತು ಸೇ-3)

ಇವರಿಗೆ:

1. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
2. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು,
3. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಪದನಿಮಿತ್ತ ರಾಜ್ಯ ಕೃಷಿ ಗಣತಿ ಆಯುಕ್ತರು, ಬೆಂಗಳೂರು.
5. ನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು.
6. ವಿಶೇಷಾಧಿಕಾರಿಗಳು, ಕೃಷಿ ಮತ್ತು ಸಹಕಾರ ಇಲಾಖೆ, ಕೃಷಿ ಮಂತ್ರಾಲಯ, ಭಾರತ ಸರ್ಕಾರ, ನವದೆಹಲಿ-110001.
7. ಎಲ್ಲಾ ಜಿಲ್ಲಾಧಿಕಾರಿಗಳು.

8. ಎಲ್ಲಾ ಉಪವಿಭಾಗಾಧಿಕಾರಿಗಳು.
9. ಎಲ್ಲಾ ಜಿಲ್ಲಾ ಭೂ ದಾಖಲೆಗಳ ಉಪನಿರ್ದೇಶಕರು.
10. ಜಿಲ್ಲೆಯ ಎಲ್ಲಾ ಕೃಷಿ ಜಂಟಿ ನಿರ್ದೇಶಕರು.
11. ಎಲ್ಲಾ ಜಿಲ್ಲೆಗಳ ತೋಟಗಾರಿಕೆ ಉಪನಿರ್ದೇಶಕರು.
12. ಜಂಟಿ ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು.
13. ಜಿಲ್ಲೆಗಳ ಎಲ್ಲಾ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು.
14. ಎಲ್ಲಾ ತಹಶೀಲ್ದಾರರುಗಳಿಗೆ(ಜಿಲ್ಲಾಧಿಕಾರಿಯವರ ಮೂಲಕ)
15. ತಾಂತ್ರಿಕ ನಿರ್ದೇಶಕರು ಸ್ಟೇಟ್ ಇನ್‌ಫಾರಮ್ಯಾಟಿಕ್ ಆಫೀಸರ್ ಎನ್.ಐ.ಸಿ, ಕರ್ನಾಟ ರಾಜ್ಯ ಘಟಕ, ಬೆಂಗಳೂರು
16. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ) ಇವರ ಆಪ್ತ ಕಾರ್ಯದರ್ಶಿ.
17. ಸರ್ಕಾರದ ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ) ಇವರ ತಾಂತ್ರಿಕ ಮತ್ತು ಆಪ್ತ ಸಹಾಯಕರು.
18. ಎಲ್ಲಾ ಉಪ ತಹಶೀಲ್ದಾರರು/ಎಲ್ಲಾ ಸಹಾಯಕ ಕೃಷಿ ನಿರ್ದೇಶಕರು/ಎಲ್ಲಾ ಸಹಾಯಕ ತೋಟಗಾರಿಕ ನಿರ್ದೇಶಕರು/ಎಲ್ಲಾ ಸಹಾಯಕ ನಿರ್ದೇಶಕರು ಭೂ ದಾಖಲೆ/ಎಲ್ಲಾ ಕಂದಾಯ ನಿರೀಕ್ಷಕರು,(ನಾಡ ಕಛೇರಿ)(ತಹಶೀಲ್ದಾರರ ಮೂಲಕ)
19. ಶಾಖಾ ರಕ್ಷಾ ಕಡತ**.